**ದಿಃ 06-06-2026 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ಪ್ರತಿವಾದಿ 2ಎ, 3, 4 ಪರ ವಕೀಲರಿಂದಃ**

ದಾವಾ ಆಸ್ತಿಗಳು ನಮ್ಮ ಜಂಟಿ ಕುಟುಂಬದ ಆಸ್ತಿಗಳಾಗಿರುತ್ತವೆ ಎಂದು ತೋರಿಸಲು ನ್ಯಾಯಾಲಯದ ಮುಂದೆ ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ. ದಾವಾ ಆಸ್ತಿಗಳು ಜಂಟಿ ಕುಟುಂಬದ ಆಸ್ತಿಗಳಾಗಿರುವುದಿಲ್ಲಾ ಮತ್ತು ಅದರಲ್ಲಿ ನನಗೆ ಯಾವುದೇ ಪಾಲು ವ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿ ನಂ.2ಎ, 3 ಮತ್ತು 5 ರವರು ಮಾಲ್ಕಿ ನಾತೆಯಿಂದ ದಾವಾ ಆಸ್ತಿಯ ಕಬ್ಜಾ ಮತ್ತು ವಹಿವಾಟಿಯಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಕಂದಾಯ ತುಂಬಿರುವ ಬಗ್ಗೆ ಮತ್ತು ದಾವಾ ಆಸ್ತಿಯ ಜಂಟಿ ಕಬ್ಜೆ ಮತ್ತು ವಹಿವಾಟನಲ್ಲಿ ನಾನು ಇರುತ್ತೇನೆ ಎಂದು ತೋರಿಸಲು ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲಾ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ 1 ನೇ ಪ್ರತಿವಾದಿಯನ್ನು ಮನೆ ಬಿಟ್ಟು ಹೊರಗೆ ಹಾಕಿರುತ್ತಾನೆ ಎಂದು ನನ್ನ ವಾದ ಪತ್ರದಲ್ಲಿ ಸುಳ್ಳು ನಮೂದಿಸಿರುತ್ತೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನನಗೇ ಯೂವುದೇ ಪಾಲು ಹಕ್ಕು ಮತ್ತು ಅಧಿಕಾರ ಇರದೇ ಇದ್ದರೂ ಸಹಿತ ದಾವಾ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಮತ್ತು ಪ್ರತಿವಾದಿಯರಿಗೆ ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ**

1 ಮತ್ತು 5 ನೇ ಪ್ರತಿವಾದಿ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೇಃಇಲ್ಲ

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

Sd/-

ಪ್ರ.ದಿ.&ನ್ಯಾದಂ., ಗೋಕಾಕ.